ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಸೋಮವಾರ, ದಿನಾಂಕ : 01 ನೇ ಫೆಬ್ರುವರಿ, 2021

ರಾಷ್ಟ್ರೀಯ ಹಸಿರು ನ್ಯಾಯಾಧೀಕರಣದ ಬಗ್ಗೆ

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು) :-

113 (125) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ ಪೀಠವು ಕೆರೆಯಂಗಳದ ಸುತ್ತಮುತ್ತ ಮತ್ತು ರಾಜಕಾಲುವೆಯ ಬಳಿ ಕಟ್ಟಡ ಇನ್ನಿತರ ಕಾಮಗಾರಿ ನಿರ್ಮಾಣ ಮಾಡುವುದಕ್ಕೆ ನಿರ್ಬಂಧ ವಿಧಿಸಿ (ಬಫರ್ ಝೋನ್) ಆದೇಶ ಹೊರಡಿಸಿರುವುದು ನಿಜವೆ ;

(ಆ) ಹಾಗಿದ್ದಲ್ಲಿ, ಆದೇಶ ನೀಡಿದ್ದು ಯಾವಾಗ ; (ಆದೇಶದ ಪೂರ್ಣ ಮಾಹಿತಿ ನೀಡುವುದು)

(ಇ) ಆದೇಶವನ್ನು ಪಾಲನೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಈ ಕುರಿತು ಹೊರಡಿಸಿರುವ ಆದೇಶದ ಪ್ರತಿ ಒದಗಿಸುವುದು)

(ಈ) ಬಫರ್ ಝೋನ್ ವ್ಯಾಪ್ತಿಯಲ್ಲಿ ಮನೆ, ನಿವೇಶನ ಖರೀದಿ ಮಾಡಿರುವವರಿಗೆ ಎನ್.ಜಿ.ಟಿ. ಆದೇಶದಿಂದ ತುಂಬ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರ ಹಿತವನ್ನು ಕಾಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ನೀಡುವುದು)